**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1487 |
| ಸದಸ್ಯರ ಹೆಸರು | : | ಶ್ರೀ ಕೆ.ಎ.ತಿಪ್ಪೇಸ್ವಾಮಿ |
| ಉತ್ತರಿಸುವ ದಿನಾಂಕ | : | 24-09-2021 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕು ಕೇಂದ್ರದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಿದ್ಯಾರ್ಥಿ ನಿಲಯಗಳನ್ನು ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನಿರ್ಮಾಣ ಮಾಡುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಅವು ಯಾವುವು; | ಬಂದಿದೆ.<br><br>2018-19ನೇ ಸಾಲಿನಲ್ಲಿ ತುಮಕೂರು ಜಿಲ್ಲೆ, ಪಾವಗಡ ತಾಲ್ಲೂಕು ವ್ಯಾಪ್ತಿಯಲ್ಲಿ ಇಲಾಖೆಯ ವತಿಯಿಂದ ನಡೆಸುತ್ತಿರುವ ಈ ಕೆಳಕಂಡ 05 ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಮಂಜೂರಾತಿ ನೀಡಲಾಗಿದ್ದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಪ್ರಾರಂಭಿಸಲಾಗಿರುತ್ತದೆ. |

ರೂ.ಲಕ್ಷಗಳಲ್ಲಿ

| ಕ್ರ. ಸಂ. | ವಿದ್ಯಾರ್ಥಿ ನಿಲಯದ ವಿವರ | ಮಂಜೂರಾತಿ ಮೊತ್ತ |
|---|---|---|
| 1 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಪಾವಗಡಟೌನ್. | 514.00 |
| 2 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ಪದವಿ ಕಾಲೇಜು ವಿದ್ಯಾರ್ಥಿ ನಿಲಯ, ಪಾವಗಡಟೌನ್. | 471.00 |
| 3 | ಸರ್ಕಾರಿ ಪದವಿ ಪೂರ್ವಕಾಲೇಜು ವಿದ್ಯಾರ್ಥಿ ನಿಲಯ, ಪಾವಗಡಟೌನ್. | 471.00 |
| 4 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ, ಪಾವಗಡಟೌನ್. | 620.00 |
| 5 | ಸರ್ಕಾರಿ ಪ್ರಥಮದರ್ಜೆಕಾಲೇಜು ಬಾಲಕರ ವಿದ್ಯಾರ್ಥಿ ನಿಲಯ, ಪಾವಗಡಟೌನ್. | 620.00 |
| | ಒಟ್ಟು | 2696.00 |

| | | |
|---|---|---|
| (ಆ) | ಈ ವಿದ್ಯಾರ್ಥಿನಿಲಯಗಳು ಪ್ರಸ್ತುತ ಶಾಲಾ-ಕಾಲೇಜುಗಳಿಂದ 4-5 ಕಿಲೋಮೀಟರ್ ಅಂತರದಲ್ಲಿ ನಿರ್ಮಾಣವಾಗುತ್ತಿರುವುದು ನಿಜವೇ; ಇದರಿಂದ ವಿದ್ಯಾರ್ಥಿಗಳು ಅಭ್ಯಸಿಸುತ್ತಿರುವ ಶಾಲಾ-ಕಾಲೇಜುಗಳಿಂದ ಇಷ್ಟು ಅಂತರದ ವಿದ್ಯಾರ್ಥಿ ನಿಲಯಗಳಿಗೆ ದಿನದಲ್ಲಿ 2-3 ಬಾರಿಯಾದರೂ ಹೋಗಿ ಬರಬೇಕು ಎಂದರೆ, ಪ್ರಯಾಸವಾಗುತ್ತದೆ ಎಂಬುದನ್ನು ಸರ್ಕಾರ ಮನಗಂಡಿಲ್ಲವೇ; | ಪಾವಗಡ ತಾಲ್ಲೂಕಿನ ಕಣಿವೆಹಳ್ಳಿ ಸಮೀಪವಿರುವ ಸರ್ವೆ ನಂ.22 ರಲ್ಲಿ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ರವರು ಮಂಜೂರು ಮಾಡಿರುವ 01 ಎಕರೆ 20 ಗುಂಟೆ ಜಮೀನಿನಲ್ಲಿ ಮೇಲ್ಕಂಡ 05 ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲಾಗಿರುತ್ತದೆ.<br><br>ಈ ಸಂಬಂಧವಾಗಿ, ದಿನಾಂಕ:17-07-2021 ರಂದು ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ನಡೆಸಲಾದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮೇಲ್ಕಂಡ ಕಟ್ಟಡ ಕಾಮಗಾರಿಗಳ ಬಗ್ಗೆ ಪರಿಶೀಲಿಸಲಾಗಿದ್ದು, ಪ್ರಾರಂಭಿಕ ಹಂತದಲ್ಲಿ 3 ಕೊಳವೆ ಬಾವಿಗಳನ್ನು ಕೊರೆಯಲಾಗಿದ್ದು ತಳಪಾಯವನ್ನು ನಿರ್ಮಿಸುವ ಬಗ್ಗೆ ಈಗಾಗಲೇ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದ್ದು, ರೂ. 34.24 ಲಕ್ಷಗಳನ್ನು ವೆಚ್ಚ ಮಾಡಲಾಗಿರುವುದರಿಂದ ಹಾಗೂ ಈ ಸ್ಥಳವು ಮುಖ್ಯ ರಸ್ತೆಗೆ ಹೊಂದಿಕೊಂಡಿರುವುದರಿಂದ ವಿದ್ಯಾರ್ಥಿಗಳು ಶಾಲೆ-ಕಾಲೇಜುಗಳಿಗೆ ಹೋಗಿ ಬರುವುದಕ್ಕೆ ಅನುಕೂಲವಾಗುತ್ತದೆ. ಆದುದರಿಂದ ಇಲ್ಲಿಯೇ ಕಟ್ಟಡಗಳನ್ನು ನಿರ್ಮಿಸುವುದು ಸೂಕ್ತವೆಂದು ತೀರ್ಮಾನ ತೆಗೆದುಕೊಳ್ಳಲಾಗಿದೆ. ಅದರಂತೆ ಕಾಮಗಾರಿಗಳು ಪ್ರಗತಿಯಲ್ಲಿವೆ.<br><br>ಆದಾಗ್ಯೂ ಸಹ ಸಾಧ್ಯತೆ/ ಅಗತ್ಯತೆ ಬಗ್ಗೆ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ರವರಿಂದ ವರದಿಯನ್ನು ಪಡೆದು ಪರಿಶೀಲಿಸಲಾಗುವುದು. |
| (ಇ) | ಹಾಲಿ ನಿರ್ಮಾಣವಾಗುತ್ತಿರುವ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾರ್ಯಗಳನ್ನು ಸ್ಥಗಿತಗೊಳಿಸಿ, ಚಳ್ಳಕೆರೆ ಮತ್ತು ಕಲ್ಯಾಣದುರ್ಗ ರಸ್ತೆಗಳಲ್ಲಿ ಅನೇಕ ವಸತಿ ಪ್ರದೇಶಗಳು ಅಭಿವೃದ್ಧಿ ಆಗಿದ್ದು, ಅಲ್ಲಿನ ಸೂಕ್ತ ಜಾಗದಲ್ಲಿ ಅಥವಾ ಶಾಲಾ-ಕಾಲೇಜುಗಳಿಂದ ಕೇವಲ ಒಂದು ಕಿಲೋಮೀಟರ್ ಅಂತರದಲ್ಲಿರುವ ಪಾವಗಡ ಸರ್ವೆ ನಂ.178 ರಲ್ಲಿರುವ ಸುಮಾರು 13 ಎಕರೆ ಖರಾಬು ಜಮೀನಿನಲ್ಲಿ, ಈ ವಿದ್ಯಾರ್ಥಿ ನಿಲಯಗಳ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಂಡು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಸ್ಥಳೀಯರ ಅಪೇಕ್ಷೆಯಂತೆ ಸರ್ಕಾರ ಮರುಪರಿಶೀಲಿಸಿ, ಕೂಡಲೇ ಈ ಬಗ್ಗೆ ಕಾರ್ಯೋನ್ಮುಖವಾಗುವುದೇ? (ಸಂಪೂರ್ಣ ವಿವರ ನೀಡುವುದು) | |

ಸಕಇ 343 ಪಕವಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು.